**ದಿನಾಂಕ: 06.04.2022 ರಂದು ಬೆಳಿಗ್ಗೆ 11-00ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 178ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| **ಸಾರ್ವಜನಿಕರು** | ಪ್ರಕಾಶ್, ಮಾರ್ಷಲ್ |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 23ನೇ ಮುಖ್ಯರಸ್ತೆ, ನಂ. 845 ಮನೆಯ ಎದುರು ಮರಗಳು ಬಿದ್ದು ವಾಹನಗಳು ಜಖಂಗೊಂಡಿರುವ ಬಗ್ಗೆ ಹಾಗೂ ಧನ್ವಂತರಿ ಉದ್ಯಾನವನದ ಒಳಗೆ ಬೇಡದ ಮರದ ರೆಂಬೆ-ಕೊಂಬೆಗಳನ್ನು ತೆರವುಗೊಳಿಸುವ ಬಗ್ಗೆ. **ಕ್ರಮ:- ಅರಣ್ಯ ಸಂರಕ್ಷಣಾಧಿಕಾರಿಗಳು**

- 23ನೇ ಮುಖ್ಯರಸ್ತೆಯಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸುವ ಬಗ್ಗೆ ಚರ್ಚಿಸಲಾಯಿತು. **ಕ್ರಮ:- ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜೆ.ಪಿ.ನಗರ ಉಪವಿಭಾಗ**

- ನಟರಾಜ ಉದ್ಯಾನವನದಲ್ಲಿ ಮರದ ರೆಂಬೆ-ಕೊಂಬೆಗಳನ್ನು ತೆರವುಗೊಳಿಸುವಂತೆ ಹಾಗೂ ಪಾರ್ಕಿನ ಎದುರು ರಸ್ತೆಯ ಬದಿ ಫುಟ್‌ಪಾತ್ ಮೇಲೆ ಹಾಕಿರುವ ಫಾಸ್ಟ್ ಫುಡ್ ಅಂಗಡಿಗಳನ್ನು ತೆರವುಗೊಳಿಸುವಂತೆ ಚರ್ಚಿಸಲಾಯಿತು. **ಕ್ರಮ :- ತೋಟಗಾರಿಕಾ ಅಧೀಕ್ಷಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ 178.**

- 12ನೇ ಅಡ್ಡರಸ್ತೆ, 15ನೇ ಮುಖ್ಯರಸ್ತೆ, 17ನೇಮುಖ್ಯರಸ್ತೆ, 21ನೇ ಮತ್ತು 22ನೇ ಮುಖ್ಯರಸ್ತೆಗಳಲ್ಲಿರುವ ವಿದ್ಯುತ್ ಕಂಬಗಳಿಗೆ ಡಿ.ಪಿ. ಸ್ವಿಚ್‌ಗಳನ್ನು ಅಳವಡಿಸುವ ಬಗ್ಗೆ ಚರ್ಚಿಸಲಾಯಿತು. **ಕ್ರಮ :- ಬೀದಿ ದೀಪಗಳ ನಿರ್ವಹಣೆ ಕಛೇರಿ, ಬಿಬಿಎಂಪಿ (ದಕ್ಷಿಣ)**

***ಪು.ತಿ.ನೋ.***

- ಧನ್ವಂತರಿ ಪಾರ್ಕಿನ ಒಳಗೆ ಮಕ್ಕಳ ಆಟದ ಮೈದಾನದಲ್ಲಿ ದೀಪದ ವ್ಯವಸ್ಥೆಯನ್ನು ಕಲ್ಪಿಸುವಂತೆ ಕೋರಲಾಯಿತು. **ಕ್ರಮ:- ಬೀದಿ ದೀಪಗಳ ನಿರ್ವಹಣೆ ಕಛೇರಿ, ಬಿಬಿಎಂಪಿ (ದಕ್ಷಿಣ)**

- 15ನೇ ಅಡ್ಡರಸ್ತೆ ಹಾಗೂ 15ನೇ ಮುಖ್ಯರಸ್ತೆಯ ಜಂಕ್ಷನ್‌ಗಳಲ್ಲಿ ರಸ್ತೆಯಲ್ಲಿ ಮಳೆ ನೀರು ಸರಾಗವಾಗಿ ಹೋಗದೆ ಅಲ್ಲಲ್ಲಿ ನಿಂತಿರುವ ಬಗ್ಗೆ. **ಕ್ರಮ :- ಮೇಜರ್ ರೋಡ್**

- ವಿಇಟಿ ಸ್ಕೂಲ್ ಮುಂಭಾಗದಲ್ಲಿ ಫುಟ್‌ಪಾತ್‌ಗಳು ದುರಸ್ತಿಗೊಂಡಿದ್ದು, ಅದನ್ನು ಸರಿಪಡಿಸುವ ಬಗ್ಗೆ ಚರ್ಚಿಸಲಾಯಿತು. **ಕ್ರಮ :- ಸಹಾಯಕ ಅಭಿಯಂತರರು, ವಾರ್ಡ್ 178.**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಇಂಜಿನಿಯರ್‌ರಾದ ಶ್ರೀ ಚಂದ್ರಶೇಖರ್, ವಾರ್ಡ್ 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ ನಂ. 178**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**